ಅ) ನೀರಾವರಿ ಉಸ್ತುವಾರಿಗಾಗಿ ಸೇಡಂ ಕಂದಾಯ ಉಪ ವಿಭಾಗ ಕೇಂದ್ರದಲ್ಲಿ ಸಣ್ಣ ನೀರಾವರಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಾರ್ಯಾಲಯ ಪ್ರಾರಂಭ ಮಾಡಲು ಸರ್ಕಾರ ತೀರ್ಮಾನ ಮಾಡಿದೆಯೇ?

ಆ) ಹಾಗಿದ್ದಲ್ಲಿ, ಈ ಕಾರ್ಯಾಲಯವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು) :

ಅ) ಇಲ್ಲ. ಗುಲ್ಬರ್ಗಾ ಜಿಲ್ಲೆಯ ಸೇಡಂ ಹಾಗೂ ಚಿಂಚೋಳಿ ತಾಲ್ಲೂಕುಗಳ ಸಣ್ಣ ನೀರಾವರಿ ಕಾಮಗಾರಿಗಳ ಉಸ್ತುವಾರಿಯನ್ನು ಚಿಂಚೋಳಿಯ ಸಣ್ಣ ನೀರಾವರಿ ಉಪ ವಿಭಾಗ ನೋಡಿಕೊಳ್ಳುತ್ತಿದೆ. ಅಂತೆಯೇ ಚಿತ್ತಾಪುರ ತಾಲ್ಲೂಕು ಹಾಗೂ ಗುಲ್ಬರ್ಗಾ ತಾಲ್ಲೂಕಿನ ಕಾಮಗಾರಿಗಳ ಉಸ್ತುವಾರಿಯನ್ನು ಗುಲ್ಬರ್ಗಾ ಸಣ್ಣ ನೀರಾವರಿ ಉಪ ವಿಭಾಗ ನೋಡಿಕೊಳ್ಳುತ್ತಿದ್ದು, ಕೆರೆ/ಅಣೆಕಟ್ಟುಗಳ ಅವ್ಯವಸ್ಥೆಯಾಗಿ ಬಡ ರೈತರಿಗೆ ನೀರಾವರಿ ತೊಂದರೆಯಾಗಿರುವಂತಹ ಸಮಸ್ಯೆಗಳು ಉದ್ಭವಿಸಿರುವುದಿಲ್ಲ.

ಆ) ಇಲ್ಲ.

ಇ) ಈ ಪ್ರಶ್ನೆ ಅನ್ವಯವಾಗುವುದಿಲ್ಲ.

ಹಸಿರು ಕಾರ್ಡ್‌ಗಳ ರದ್ದು

4438 - ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಡು ಬಡವರಿಗೆ ನೀಡಲಾಗುತ್ತಿರುವ ಹಸಿರು ಕಾರ್ಡುಗಳನ್ನು ರದ್ದುಗೊಳಿಸಲಾಗುತ್ತಿದೆಯೇ? ಅವುಗಳ ಸಂಖ್ಯೆ ಎಷ್ಟು?

ಆ) ಇದರಿಂದ ಗ್ರಾಮಾಂತರ ಹಾಗೂ ನಗರ ಪ್ರದೇಶಗಳಲ್ಲಿರುವ ಹಸಿರು ಕಾರ್ಡ್ ಪಡಿತರದಾರರಿಗೆ ಬೇರೆ ವ್ಯವಸ್ಥೆ ಕಲ್ಪಿಸಲಾಗಿದೆಯೇ?

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :

ಅ) ಇಲ್ಲ.

ಆ) ಮೇಲಿನ (ಅ)ದ ಉತ್ತರದಿಂದ ಉದ್ಭವಿಸುವುದಿಲ್ಲ.

ಭದ್ರ ಪ್ರಾಜೆಕ್ಟ್ ವ್ಯಾಪ್ತಿಯ ಕಾಮಗಾರಿ ಬಿಲ್ಲುಗಳು

4440 - ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಬೃಹತ್ ಮತ್ತು ಮಧ್ಯಮ ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭದ್ರಾ ಪ್ರಾಜೆಕ್ಟ್ ವ್ಯಾಪ್ತಿಯಲ್ಲಿ ಕೈಗೊಂಡಿರುವ ಕಾಮಗಾರಿಗಳಾವುವು?

ಅ) ಸದರಿ ಕಾಮಗಾರಿಗಳಲ್ಲಿ ಬಾಕಿ ಇರುವ ಬಿಲ್ಲುಗಳ ಮೊತ್ತವೆಷ್ಟು ಹಾಗೂ ಇವುಗಳ ವಿಲೇವಾರಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ?

ಶ್ರೀ ಹೆಚ್.ಕೆ. ಪಾಟೀಲ್ (ಬೃಹತ್ ಮತ್ತು ಮಧ್ಯಮ ನೀರಾವರಿ ಮಂತ್ರಿಗಳು)

ಅ) ಈ ಯೋಜನೆ ವ್ಯಾಪ್ತಿಯಲ್ಲಿ ವಿವಿಧ ಯೋಜನೆಗಳು ಇದ್ದು, ಸದರಿ ಯೋಜನೆಗಳು ಈಗ ನಿರ್ವಹಣ ಹಂತದಲ್ಲಿ ಇರುತ್ತವೆ. ಈ ಯೋಜನೆಯಿಂದ ರೈತರ ಜಮೀನುಗಳಿಗೆ ಸಮರ್ಪಕವಾಗಿ ನೀರೊದಗಿಸಲು ನೀರು ನಿರ್ವಹಣೆಗಾಗಿ ಕಾಲುವೆಗಳ ದುರಸ್ತಿ ಹಾಗೂ ರಸ್ತೆ ಕಾಮಗಾರಿಗಳ ದುರಸ್ತಿ ಮತ್ತು ಇತರೆ ಅತೀ ಅವಶ್ಯಕ ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.

ಆ) ರೂ.2514.27 ಲಕ್ಷಗಳ ಬಾಕಿ ಬಿಲ್ಲುಗಳಿರುತ್ತದೆ. ಬಿಲ್ಲುಗಳನ್ನು ಜೇಷ್ಠತೆ ಮೇಲೆ ವಿಲೇ ಮಾಡಲಾಗುತ್ತಿದೆ.

ಪಂಪ್‌ಸೆಟ್ ಶುಲ್ಕ ಪಾವತಿಗೆ ಅವಧಿ ವಿಸ್ತರಣೆ

4441 -ಶ್ರೀ ಚಿಕ್ಕನಗೌಡರ ಸಿದ್ದನಗೌಡ ಈಶ್ವರಗೌಡ (ಕಲಘಟಗಿ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರೈತರು ಪಂಪ್‌ಸೆಟ್‌ಗಳಿಗೆ ಅಕ್ರಮವಾಗಿ ಪಡೆದಿರುವ ವಿದ್ಯುತ್ ಸಂಪರ್ಕವನ್ನು ಸಕ್ರಮಗೊಳಿಸಿಕೊಳ್ಳಲು ಈಗ ನಿಗದಿಮಾಡಿರುವ ಅವಧಿಯನ್ನು ವಿಸ್ತರಿಸಲು ಸರ್ಕಾರ ನಿರ್ಧರಿಸಿದೆಯೇ ?

ಆ) ಇನ್ನೂ ಎಷ್ಟು ಅಕ್ರಮ ಸಂಪರ್ಕವನ್ನು ಸಕ್ರಮಗೊಳಿಸಿಕೊಳ್ಳಲು ಬಾಕಿ ಇದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

ಇ) ಶುಲ್ಕ ವಿಧಿಸುವ ವಿಚಾರದಲ್ಲಿ ಕೆ.ಪಿ.ಟಿ.ಸಿ.ಎಲ್. ನವರು ರೈತರನ್ನು ಸುಲಿಗೆ ಮಾಡುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ? ಹಾಗಿದ್ದಲ್ಲಿ ಇದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ?

ಶ್ರೀ ವೀರಕುಮಾರ್ ಅ. ಪಾಟೀಲ್ (ಇಂಧನ ರಾಜ್ಯ ಸಚಿವರು) :

ಅ) ರೈತರು ಪಂಪ್‌ಸೆಟ್ಟುಗಳಿಗೆ ಅಕ್ರಮವಾಗಿ ಪಡೆದಿರುವ ವಿದ್ಯುತ್ ಸಂಪರ್ಕನ್ನು ಸಕ್ರಮಗೊಳಿಸಿಕೊಳ್ಳಲು ನಿಗದಿಪಡಿಸಲಾಗಿದ್ದ ಅವಧಿಯನ್ನು 15.10.2000 ರಿಂದ 30.11.2000ದವರೆಗೆ ಅಂತಿಮ ಅವಕಾಶವಾಗಿ ವಿಸ್ತರಿಸಲಾಗಿದೆ.

ಆ) ದಿನಾಂಕ 31.30.2000ರ ಅಂತ್ಯದಲ್ಲಿರುವಂತೆ ಇನ್ನೂ ಒಟ್ಟು 39,558 ರೈತರ ಅಕ್ರಮ ಸಂಪರ್ಕ ಹೊಂದಿರುವ ಪಂಪ್‌ಸೆಟ್ಟುಗಳು ಸಕ್ರಮಗೊಳ್ಳಬೇಕಾಗಿದೆ. ಇವುಗಳ ಜಿಲ್ಲಾವಾರು ವಿವರಗಳನ್ನು ಅನುಬಂಧದಲ್ಲಿ ನೀಡಿದೆ.